# ಡೆಂಗಿ ಜ್ವರ ನಿಯಂತ್ರಣ ಎಲ್ಲರ ಜವಾಬ್ದಾರಿ

## ಎಲ್ಲರೂ ತಿಳಿದಿರಬೇಕಾದ ಮೂಲ ಮಾಹಿತಿ

**1. ಡೆಂಗಿ ಜ್ವರ ಎಂದರೇನು?**

ಡೆಂಗಿ ಜ್ವರ ವೈರಸ್‌ನಿಂದ ಉಂಟಾಗುವ ಖಾಯಿಲೆ. ಇದು ಸೋಂಕು ಹೊಂದಿದ 'ಈಡಿಸ್ ಈಜಿಪ್ಟೈ' ಸೊಳ್ಳೆಯ ಕಚ್ಚುವಿಕೆಯಿಂದ ಒಬ್ಬರಿಂದ ಒಬ್ಬರಿಗೆ ಹರಡುತ್ತೆ. ಈ ಸೊಳ್ಳೆಗಳು ಸಾಮಾನ್ಯವಾಗಿ ಸ್ವಚ್ಛ ನೀರಿನಲ್ಲಿ ಸಂತಾನಭಿವೃದ್ಧಿ ಮಾಡುತ್ತವೆ ಹಾಗೂ ಹಗಲು ಹೊತ್ತಿನಲ್ಲಿ ಮನುಷ್ಯರನ್ನು ಕಚ್ಚುತ್ತವೆ.



**2. ಈ ರೋಗದ ಮುಖ್ಯ ಲಕ್ಷಣಗಳಾವುವು?**

ಇದ್ದಕ್ಕಿದ್ದಂತೆ ತೀವ್ರ ಜ್ವರ, ವಿಪರೀತ ತಲೆನೋವು, ಕಣ್ಣುಗಳ ಹಿಂಭಾಗ, ಮಾಂಸಖಂಡ ಮತ್ತು ಕೀಲುಗಳಲ್ಲಿ ವಿಪರೀತ ನೋವು ಕಾಣಿಸಿಕೊಳ್ಳುವುದು, ಈ ರೋಗದ ಪ್ರಮುಖ ಲಕ್ಷಣಗಳು. ತೀವ್ರ ಸ್ಥಿತಿಯಲ್ಲಿ ಬಾಯಿ, ಮೂಗು ಮತ್ತು ಒಸಡುಗಳಿಂದ ರಕ್ತಸ್ರಾವ ಹಾಗೂ ಚರ್ಮದ ಮೇಲೆ ಅಲ್ಲಲ್ಲಿ ರಕ್ತಸ್ರಾವದ ಗುರುತುಗಳು ಕಾಣಿಸಿಕೊಳ್ಳುತ್ತದೆ.

**3. ಈ ರೋಗಕ್ಕೆ ಚಿಕಿತ್ಸೆ ಏನು?**

ಡೆಂಗಿ ಜ್ವರಕ್ಕೆ ಯಾವುದೇ ನಿರ್ದಿಷ್ಟ ಔಷಧಿ ಅಥವಾ ಲಸಿಕೆ ಇರುವುದಿಲ್ಲ. ರೋಗದ ಲಕ್ಷಣಗಳಿಗನುಸಾರವಾಗಿ ವೈದ್ಯರಿಂದ ಸೂಕ್ತ ಚಿಕಿತ್ಸೆ ಪಡೆಯಬಹುದು. ಇಂತಹ ಲಕ್ಷಣಗಳು ಕಂಡುಬಂದರೆ ತಕ್ಷಣ ಹತ್ತಿರದ ಸರಕಾರಿ ಆಸ್ಪತ್ರೆ, ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯರಲ್ಲಿ ಪರೀಕ್ಷಿಸಿಕೊಂಡು ಸೂಕ್ತ ಚಿಕಿತ್ಸೆಯನ್ನು ಪಡೆಯಬೇಕು.

**4. ಈ ರೋಗದ ನಿಯಂತ್ರಣ ಹೇಗೆ?**

ಸೊಳ್ಳೆಗಳ ನಿಯಂತ್ರಣ ಒಂದೇ ಡೆಂಗಿ ರೋಗದ ಹತೋಟಿಗೆ ಮುಖ್ಯ ವಿಧಾನ. ಈ ಸೊಳ್ಳೆಗಳು ನೀರನ್ನು ಶೇಖರಿಸಿಡುವ ಸಿಮೆಂಟ್ ತೊಟ್ಟಿ, ಕಲ್ಲುಚಪ್ಪಡಿಯಿಂದ ನಿರ್ಮಿಸಿದ ತೊಟ್ಟಿ, ಡ್ರಮ್ಮು, ಬ್ಯಾರೆಲ್, ಮಣ್ಣಿನ ಮಡಿಕೆ, ಉಪಯೋಗಿಸದ ಒರಳುಕಲ್ಲು ಮುಂತಾದ ಕಡೆ ಶೇಖರವಾಗುವ ನೀರಿನಲ್ಲಿ ಉತ್ಪತ್ತಿಯಾಗುವುದರಿಂದ, ಈ ರೀತಿ ನೀರು ನಿಲ್ಲದಂತೆ ಎಚ್ಚರಿಕೆ ವಹಿಸಬೇಕು.

**ಮುಂಜಾಗೃತಾ ಕ್ರಮ**

- ಎಲ್ಲಾ ನೀರಿನ ತೊಟ್ಟಿ, ಡ್ರಮ್ಮು, ಬ್ಯಾರೆಲ್, ಏರ್ ಕೂಲರ್ ಇತ್ಯಾದಿಗಳನ್ನು ವಾರಕೊಮ್ಮೆ ಖಾಲಿ ಮಾಡಿ, ಒಣಗಿಸಿ ಮತ್ತೆ ಭರ್ತಿ ಮಾಡಿಕೊಳ್ಳುವುದು.
- ನೀರು ಖಾಲಿ ಮಾಡಲು ಸಾಧ್ಯವಿಲ್ಲದ ತೊಟ್ಟಿ ಮುಂತಾದವುಗಳನ್ನು ಸೊಳ್ಳೆಗಳು ಒಳಗೆ ನುಸುಳದಂತೆ ಸರಿಯಾದ ಮುಚ್ಚಳದಿಂದ ಮುಚ್ಚುವುದು.
- ಬಯಲಿನಲ್ಲಿರುವ ತ್ಯಾಜ್ಯ ವಸ್ತುಗಳಾದ ಟೈರು, ಎಳೆನೀರಿನ ಚಿಪ್ಪು, ಒಡೆದ ಬಾಟಲಿ ಮುಂತಾದವುಗಳಲ್ಲಿ ಮಳೆನೀರು ಸಂಗ್ರಹವಾದಂತೆ ಎಚ್ಚರ ವಹಿಸುವುದು ಅಥವಾ ಸೂಕ್ತ ವಿಲೇವಾರಿ ಮಾಡುವುದು.
- ಸ್ವಯಂ ರಕ್ಷಣಾ ವಿಧಾನಗಳಾದ ಸೊಳ್ಳೆ ನಿರೋಧಕಗಳನ್ನು ಹಾಗೂ ಸೊಳ್ಳೆ ಪರದೆಯನ್ನು ಬಳಸಿ, ಸೊಳ್ಳೆಗಳು ಕಚ್ಚದಂತೆ ಎಚ್ಚರಿಕೆ ವಹಿಸುವುದು.












**ಗಮನಿಸಿ:**

- ಡೆಂಗಿ ರೋಗ ಬಂದಾಗ, ರಕ್ತದಲ್ಲಿರುವ ಪ್ಲೇಟ್‌ಲೆಟ್‌ಗಳ ಕೊರತೆಯಾಗುವುದೆಂಬ ವದಂತಿ ಜನಸಾಮಾನ್ಯರಲ್ಲಿ ಹರಡಿದೆ. ಆದರೆ, ಪ್ಲೇಟ್‌ಲೆಟ್ ಕಡಿಮೆಯಾದ ರೋಗಿಗಳಿಗೆ ವೈದರು ನೀಡುವ ಐ.ವಿ.ದ್ರಾವಣದಿಂದ, ತಕ್ಷಣ ಪ್ಲೇಟ್‌ಲೆಟ್‌ಗಳ ಪ್ರಮಾಣ ಹೆಚ್ಚಾಗಿ, ರೋಗಿಯು ಚೇತರಿಸಿಕೊಳ್ಳುತ್ತಾನೆ
- ರಾಜ್ಯದ 171 ಪರವಾನಗಿ ಪಡೆದ ರಕ್ತನಿಧಿಗಳಲ್ಲಿ 30 ರಕ್ತನಿಧಿಗಳಿಗೆ, ರಕ್ತದ ಕಣಗಳನ್ನು ಬೇರ್ಪಡಿಸಲು ಅನುಮತಿ ನೀಡಲಾಗಿದ್ದು, ಯಾವುದೇ ಡೆಂಗಿ ರೋಗಿಯು, ಉಲ್ಬಣಾವಸ್ಥೆ ತಲುಪಿದರೆ, ಪ್ಲೇಟ್‌ಲೆಟ್‌ಗಳು ಲಭ್ಯವಾಗುವಂತೆ ವ್ಯವಸ್ಥೆ ಮಾಡಲಾಗಿದೆ.

**"ನೀರು ನಿಲ್ಲದಂತೆ ಎಚ್ಚರ ವಹಿಸಿ – ಡೆಂಗಿ ಜ್ವರದಿಂದ ಪಾರಾಗಿ"**

**ಹೆಚ್ಚಿನ ಮಾಹಿತಿಗೆ ಸ್ಥಳೀಯ ಆರೋಗ್ಯ ಸಹಾಯಕರನ್ನು ಭೇಟಿ ಮಾಡಿ**

**ಪ್ರಕಟಣೆ: ಕಪುಚಿನ್ ಕೃಷಿಕ್ ಸೇವಾ ಕೇಂದ್ರ (ರಿ)**
**ಚೈಲ್ಡ್‌ಫಂಡ್ ಇಂಡಿಯಾ**
ChildFund India
**ಇಮೇಲ್:** capuchinchildfund@gmail.com **ವೆಬೆಸೈಟ್:** capuchinksk.org
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಳ್ತಂಗಡಿ**